# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದ ಗ್ರಾಮೀಣ ಕುಡಿಯುವ ನೀರಿನ ತುರ್ತು ಸೇವಾ ವಾಹನವನ್ನು (Water Ambulance) ಜಿಲ್ಲಾ ಪಂಚಾಯತ್ ವತಿಯಿಂದ ಸೃಜಿಸುವ ಕುರಿತು.

**ಉಲ್ಲೇಖ:** ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆರವರ ಅ.ಸ.ಪತ್ರ ಸಂಖ್ಯೆ: ಗ್ರಾಅಪ/01/ಆಶಾ/2017, ದಿನಾಂಕ:14.02.2017

---

**ಪೀಠಿಕೆ:**

ಗ್ರಾಮೀಣ ಜನವಸತಿಗಳಲ್ಲಿ ಕಲ್ಪಿಸಿರುವ ಕುಡಿಯುವ ನೀರಿನ ವ್ಯವಸ್ಥೆಯಲ್ಲಿ ವ್ಯತ್ಯಯ, ಅವುಗಳ ದುರಸ್ಥಿಯಲ್ಲಿ ಆಗುತ್ತಿರುವ ವಿಳಂಬ, ಈಗಾಗಲೇ ಸರ್ಕಾರದಿಂದ ಅನುಮೋದನೆಯಾಗಿ ಅನುಷ್ಠಾನಗೊಳಿಸಿರುವ ನೀರು ಶುದ್ಧೀಕರಣ ಘಟಕಗಳ ಕಾರ್ಯ ನಿರ್ವಹಣೆಯಲ್ಲಿನ ವ್ಯತ್ಯಯದಿಂದ ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ, ಬರಪರಿಹಾರ ಕಾಮಗಾರಿಗಳಲ್ಲಿ ಉಂಟಾಗುತ್ತಿರುವ ಲೋಪದೋಷಗಳು, ಕುಡಿಯುವ ನೀರಿನ ಕಾಮಗಾರಿಗಳಲ್ಲಿನ ವಿಳಂಬ ಇವೇ ಮುಂತಾದ ಸಮಸ್ಯೆಗಳು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಹಿನ್ನೆಯಲ್ಲಿ, ಗ್ರಾಮೀಣ ಕುಡಿಯುವ ನೀರು ಪೂರೈಕೆಗೆ ಸಂಬಂಧಿಸಿದ ಕೊಳವೆ ಜಾಲದ ಸಮರ್ಪಕ ವ್ಯವಸ್ಥೆ, ತುರ್ತು ಕಾಮಗಾರಿಗಳು, ಶೀಘ್ರ ದುರಸ್ಥಿ, ನೀರು ಶುದ್ಧೀಕರಣ ಘಟಕದ ಚಾಲನೆ, ಹೆಚ್ಚಿನ ಕಾರ್ಯಕ್ಷಮತೆ, ದುರಸ್ಥಿ, ಬರ ಪರಿಹಾರ ಕಾಮಗಾರಿಗಳ ಮೇಲುಸ್ತುವಾರಿ, ಇವೇ ಮುಂತಾದ ವಿಷಯಗಳ ಉಸ್ತುವಾರಿ ನಡೆಸಿ ಸಂಬಂಧಿಸಿದ ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಹರಿಸುವ ಸಲುವಾಗಿ ಪ್ರತೀ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಒಂದು **"ಕುಡಿಯುವ ನೀರಿನ ತುರ್ತು ಸೇವಾ ವಾಹನವನ್ನು (Water Ambulance)"** ಸಜ್ಜುಗೊಳಿಸಿ, ಪ್ರತೀ ಜಿಲ್ಲೆಗಳಲ್ಲಿ ವಾಹನ ಸೇವೆಯನ್ನು ತುರ್ತಾಗಿ ಪ್ರಾರಂಭಿಸಲು ಸರ್ಕಾರವು ನಿರ್ಧರಿಸಿರುತ್ತದೆ. ಆದ್ದರಿಂದ ಈ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 01 ಗ್ರಾನೀಸ(8) 2017 ಬೆಂಗಳೂರು, ದಿನಾಂಕ:14.03.2017</u>**

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, ಪ್ರತೀ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿ ಒಂದು **"ಕುಡಿಯುವ ನೀರಿನ ತುರ್ತು ಸೇವಾ ವಾಹನವನ್ನು (Water Ambulance)"** ಸಜ್ಜುಗೊಳಿಸಿ ವಾಹನ ಸೇವೆಯನ್ನು ತುರ್ತಾಗಿ ಪ್ರಾರಂಭಿಸಲು ಸರ್ಕಾರವು ಹರ್ಷಿಸುತ್ತದೆ. ಸದರಿ ವಾಹನ ವ್ಯವಸ್ಥೆಗೆ ಸಂಬಂಧಿಸಿದಂತೆ ಈ ಕೆಳಕಂಡ ಮಾರ್ಗಸೂಚಿ/ ನಿಬಂಧನೆಗಳನ್ನು ಅನುಸರಿಸತಕ್ಕದ್ದು.

- ವಾಹನ ವ್ಯವಸ್ಥೆಗೆ ಅಗತ್ಯವಿರುವ ವಾಹನವನ್ನು ಹೊರಗುತ್ತಿಗೆ ಆಧಾರ ಮೇಲೆ ನಿಗಧಿಪಡಿಸಿ, ಈ ವಾಹನಕ್ಕೆ ತಗಲುವ ವೆಚ್ಚವನ್ನು NRDWP Support Activity ಅಡಿಯಲ್ಲಿ ಭರಿಸತಕ್ಕದ್ದು.

- ಕುಡಿಯುವ ನೀರಿನ ತುರ್ತು ಸೇವಾ ವಾಹನವನ್ನು (Water Ambulance) ನಿರ್ವಹಿಸಲು ಹಾಗೂ ದೂರುಗಳನ್ನು ಸ್ವೀಕರಿಸಿ, ದುರಸ್ಥಿಗೊಳಿಸಲು ತಾಂತ್ರಿಕ/ನುರಿತ ಸಿಬ್ಬಂದಿಗಳನ್ನು ಅಗತ್ಯತೆಗೆ ಅನುಗುಣವಾಗಿ ನೇಮಕಮಾಡುವುದು ಮತ್ತು ಸದರಿ ಸಿಬ್ಬಂದಿಗಳ ವೇತನ/ಸಂಭಾವನೆಯ ವೆಚ್ಚವನ್ನು NRDWP Support Activity ಅಡಿಯಲ್ಲಿ ಭರಿಸತಕ್ಕದ್ದು.

- ತಾಲ್ಲೂಕು/ಜಿಲ್ಲಾ ಮಟ್ಟದಲ್ಲಿ ದೂರು ಸ್ವೀಕರಿಸಿ, Log Book/ದಾಖಲಾತಿ ಪುಸ್ತಕದಲ್ಲಿ ದಾಖಲಿಸಿ, ದಾಖಲೆಗಳ ಕಾಯ್ದಿರಿಸುವಿಕೆ, ಕರ್ತವ್ಯ ನಿರ್ವಹಣೆಗೆ ಸಂಬಂಧಿಸಿದಂತೆ, ಗ್ರಾ.ಕು.ನೀ.ನೈ. ಇಲಾಖೆಯ ವಿಭಾಗ ಕಛೇರಿಯಲ್ಲಿ ಸ್ಥಳಾವಕಾಶ ಒದಗಿಸುವುದು. ಜೊತೆಗೆ, ಸಂಬಂಧಿತ ಸಿಬ್ಬಂದಿಗಳು ಸ್ಥಳಭೇಟಿ ನೀಡಿ ಉಪಕರಣ/ವಿನ್ಯಾಸವನ್ನು ದುರಸ್ಥಿಗೆ ಒಳಪಡಿಸಲು ಅಗತ್ಯವಿರುವ ಇಂಧನ ಖರ್ಚು-ವೆಚ್ಚವನ್ನು ಗ್ರಾಮ ಪಂಚಾಯತ್‌ಗಳ 'ನೀರು ಪೂರೈಕೆಗೆ ಮೀಸಲಿರುವ' ಕಾರ್ಯಾಚರಣೆ ಮತ್ತು ನಿರ್ವಹಣಾ ವೆಚ್ಚದಿಂದ (O&M) ಭರಿಸುವುದು.

- ಸರ್ಕಾರದಿಂದ ಅನುಮೋದಿಸಿ, ಈಗಾಗಲೇ ಅನುಷ್ಠಾನಗೊಳಿಸಿರುವ ನೀರು ಶುದ್ಧೀಕರಣ ಘಟಕಗಳ ಕಾರ್ಯನಿರ್ವಹಣೆಯಲ್ಲಿ ಉಂಟಾಗುವ ವ್ಯತ್ಯಯಗಳ ದುರಸ್ಥಿಗೆ ತಗಲುವ ವೆಚ್ಚವನ್ನು ಗ್ರಾಮ ಪಂಚಾಯತ್‌ಗಳ 'ನೀರು ಪೂರೈಕೆಗೆ ಮೀಸಲಿರುವ' ಕಾರ್ಯಾಚರಣೆ ಮತ್ತು ನಿರ್ವಹಣಾ ವೆಚ್ಚದಿಂದ (O&M) ಭರಿಸುವುದು.

- ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರನ್ನು ಸಕಾಲದಲ್ಲಿ ಒದಗಿಸಿ ಕುಡಿಯುವ ನೀರಿನ ಸಮಸ್ಯೆ ಪರಿಹರಿಸಲು ಸಂಬಂಧಪಟ್ಟ ಜಿಲ್ಲಾ ಪಂಚಾಯತ್ / ತಾಲ್ಲೂಕು ಪಂಚಾಯತ್ / ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗ / ಉಪ-ವಿಭಾಗದವರು ಸಮನ್ವಯ ಸಾಧಿಸಿ ಯೋಜನೆಯನ್ನು ಯಶಸ್ವಿಗೊಳಿಸಿವುದು.

- ಮೇಲೆ ಹೇಳಿರುವ ಎಲ್ಲಾ ಚಟುವಟಿಕೆಗಳ ಮೇಲುಸ್ತುವಾರಿ, ಯಶಸ್ವಿ ನಿರ್ವಹಣೆಗೆ ಸಂಬಂಧಿಸಿದಂತೆ ಜಿಲ್ಲಾ ಮಟ್ಟದಲ್ಲಿ ಒಬ್ಬ ನೋಡಲ್ ಅಧಿಕಾರಿಯನ್ನು ನಿಯೋಜಿಸಿ, ಸದರಿ ವಾಹನದ ಸಂಪೂರ್ಣ ಜವಾಬ್ದಾರಿಯನ್ನು ಅವರಿಗೆ ನೀಡುವುದು ಹಾಗೂ ದೂರು ಸ್ವೀಕೃತಿ, ಸ್ಥಳಭೇಟಿ, ದುರಸ್ಥಿಗೊಳಪಟ್ಟಿರುವ ಘಟಕ/ಅಂಶ, ದುರಸ್ಥಿಗೆ ತಗುಲಿದ ವೆಚ್ಚ, ವೆಚ್ಚ ಭರಿಸಿದ ವಿವರ ಮುಂತಾದವುಗಳನ್ನೊಳಗೊಂಡ ವಿಷಯಗಳ ಕುರಿತು ಪ್ರತೀ ವಾರದ ಕಡೆಯ ಕೆಲಸದ ದಿನದಂದು ವರದಿ ತಯಾರಿಸಿ, ಸಂಬಂಧಿತ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸುವುದು.

- ಮೇಲ್ಕಂಡ ಅಂಶಗಳ ಬಗ್ಗೆ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕೈಗೊಂಡ ಕ್ರಮದ ಕುರಿತು ಒಂದು ವಾರದೊಳಗೆ ಅನುಪಾಲನಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸುವುದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

ಆಯುಕ್ತರು ಹಾಗೂ
ಸರ್ಕಾರದ ಪದನಿಮಿತ್ತ ಕಾರ್ಯದರ್ಶಿ,
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

**ಪ್ರತಿಗಳು:**

1. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
2. ರಾಜ್ಯದ ಎಲ್ಲಾ (30) ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು / ಮುಖ್ಯ ಲೆಕ್ಕಾಧಿಕಾರಿಗಳು.
3. ನಿರ್ದೇಶಕರು, WSSO, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
4. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು, ಬೆಳಗಾವಿ, ಕಲಬುರ್ಗಿ ಮತ್ತು ಮೈಸೂರು ವೃತ್ತ.
5. ಮುಖ್ಯ ಲೆಕ್ಕಾಧಿಕಾರಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಕಾವೇರಿ ಭವನ, ಬೆಂಗಳೂರು.
6. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
7. ಎಲ್ಲಾ 31 ವಿಭಾಗಗಳ ಕಾರ್ಯಪಾಲಕ ಅಭಿಯಂತರರು, ಗ್ರಾ.ಕು.ನೀ.ನೈ. ಇಲಾಖೆ.
8. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ ಪ್ರಧಾನ ಕಾರ್ಯದರ್ಶಿ ಇವರ ಆಪ್ತ ಕಾರ್ಯದರ್ಶಿಗಳು.
9. ಆಯುಕ್ತರು, ಮತ್ತು ಸರ್ಕಾರದ ಪದನಿಮಿತ್ತ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ ಇಲಾಖೆ.
10. ಸರ್ಕಾರದ ಜಂಟಿ ಕಾರ್ಯದರ್ಶಿ(ಆಡಳಿತ-1)/ (ಆಡಳಿತ-2) ಗ್ರಾ.ಅಪಂರಾಜ್ ಇಲಾಖೆರವರ ಆಪ್ತ ಸಹಾಯಕರು
11. ಆಂತರಿಕ ಆರ್ಥಿಕ ಸಲಹೆಗಾರರು, RDPR ಇಲಾಖೆ ಇವರುಗಳ ಆಪ್ತ ಸಹಾಯಕರು.
12. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ ಕರ್ನಾಟಕ ವಿಕಾಸ ಗ್ರಾಅಪಂ.ರಾಜ್ ಇಲಾಖೆ, ಬೆಂಗಳೂರು.
13. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂ.ರಾಜ್ ಇಲಾಖೆ (ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5 ಪ್ರತಿಗಳು).
14. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
15. ಶಾಖಾ ರಕ್ಷಾ ಕಡತ: ಹೆಚ್ಚುವರಿ ಪ್ರತಿಗಳು.